ಕಾಲೇಜು ಶಿಕ್ಷಣ ಇಲಾಖೆ
ಕರ್ನಾಟಕ ಸರ್ಕಾರ
Department of Collegiate Education
Government of Karnataka

NO. 1, 2nd Floor, DTE Building, Palace Road, Bangalore - 560 001; Phone: 080 2226 3327, Fax: 080 2228 3758, email: bngcce@kar.nic.in

ಸಂಖ್ಯೆ: ಕಾಶಿಇ/ಮಾತಂವಿ/42/ಲ್ಯಾಪ್‌ಟಾಪ್/2016-17 **Office of the Commissioner**

ದಿನಾಂಕ: 04 .05.2018

## ಸುತ್ತೋಲೆ

ವಿಷಯ: ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ ಪ.ಜಾ/ಪ.ಪಂಗಡದ ಪ್ರಥಮ ಪದವಿ ವಿದ್ಯಾರ್ಥಿಗಳಿಗೆ ಒದಗಿಸಿದ ಇ-ಕಂಟೆಟ್ ತುಂಬಿಸಿದ ಲ್ಯಾಪ್‌ಟಾಪ್‌ಗಳನ್ನು ವಿತರಣೆ ಮಾಡಿರುವ ಬಗ್ಗೆ ಮಾಹಿತಿ ಕೋರುವ ಬಗ್ಗೆ

ಉಲ್ಲೇಖ:
1. ಸರ್ಕಾರದ ಆದೇಶ ಸಂಖ್ಯೆ: ಇಡಿ 4 ಹೆಚ್‌ಪಿಸಿ 2017, ಬೆಂಗಳೂರು ದಿ. 18/02/2017, 21/03/2017, 27/03/2017.
2. ಸರ್ಕಾರದ ಪತ್ರ ಸಂಖ್ಯೆ: ಇಡಿ 4 ಹೆಚ್‌ಪಿಸಿ 2017, ಬೆಂಗಳೂರು ದಿನಾಂಕ: 26.12.2017.
3. ಈ ಕಛೇರಿ ಸುತ್ತೋಲೆ ಸಂಖ್ಯೆ: ಕಾಶಿಇ/ಮಾತಂವಿ/27/ಲ್ಯಾಪ್‌ಟಾಪ್/16-17 ದಿನಾಂಕ: 05/08/2017, 11.10.2017.
4. ಸಮ ಸಂಖ್ಯೆಯ ಸುತ್ತೋಲೆ ದಿನಾಂಕ: 29.12.2017.

\>>><<

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ, ಕುಟುಂಬದ ವಾರ್ಷಿಕ ವರಮಾನ ರೂ.2.50 ಲಕ್ಷಗಳಿಗಿಂತ ಕಡಿಮೆ ಇರುವ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ಪ್ರಥಮ ಪದವಿ ವಿದ್ಯಾರ್ಥಿಗಳಿಗೆ ಇ-ಕಂಟೆಟ್ ತುಂಬಿಸಿದ ಲ್ಯಾಪ್‌ಟಾಪ್‌ಗಳನ್ನು ಕಲಿಕಾ ಸಾಮಗ್ರಿಯಾಗಿ ಒದಗಿಸಿ, ಅರ್ಹ ವಿದ್ಯಾರ್ಥಿಗಳಿಗೆ ವಿತರಿಸುವಂತೆ ಉಲ್ಲೇಖ(1)&(2)ರಲ್ಲಿ ಸರ್ಕಾರದ ಆದೇಶಿಸಿರುತ್ತದೆ. ಅದರಂತೆ ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ ಎಸ್.ಸಿ./ಎಸ್.ಟಿ. ವಿದ್ಯಾರ್ಥಿಗಳ ಸಂಖ್ಯೆಗನುಗುಣವಾಗಿ ಕಾಲೇಜುಗಳ ಕೋರಿಕೆಯನ್ವಯ ಲ್ಯಾಪ್‌ಟಾಪ್‌ಗಳನ್ನು ಒದಗಿಸಲಾಗಿರುತ್ತದೆ. ಉಲ್ಲೇಖ(4)ರ ಪತ್ರದಲ್ಲಿ ವಿದ್ಯಾರ್ಥಿಗಳಿಗೆ ವಿತರಣೆ ಮಾಡಿರುವ ಲ್ಯಾಪ್‌ಟಾಪ್‌ಗಳ ಮಾಹಿತಿಯನ್ನು ಇ-ಮೇಲ್ ಮೂಲಕ ಹಾಗೂ ಇಲಾಖೆಯ ವೆಬ್‌ಸೈಟ್‌ನಲ್ಲಿ ಲಭ್ಯಮಾಡಲಾಗಿದ್ದ ಗೂಗಲ್ ಫಾರ್ಮ್‌ನಲ್ಲಿ ಮಾಹಿತಿಯನ್ನು ಒದಗಿಸುವಂತೆ ಸೂಚಿಸಲಾಗಿತ್ತು.

ಪ್ರಸ್ತುತ ತಮ್ಮ ಕಾಲೇಜುಗಳಿಂದ ಇ-ಕಂಟೆಂಟ್ ತುಂಬಿದ ಲ್ಯಾಪ್‌ಟಾಪ್‌ಗಳಿಗೆ ಸಂಬಂಧಿಸಿದಂತೆ ***ತಾವು ಸಲ್ಲಿಸಿದ ಕೋರಿಕೆ, ಕಾಲೇಜಿಗೆ ಒದಗಿಸಲಾದ ಲ್ಯಾಪ್‌ಟಾಪ್‌ಗಳ ಸಂಖ್ಯೆ, ಕಾಲೇಜು ಹಂತದಲ್ಲಿ ವಿತರಿಸಲಾಗಿರುವ ಒಟ್ಟು ಲ್ಯಾಪ್‌ಟಾಪ್‌ಗಳು ಹಾಗೂ ಲ್ಯಾಪ್‌ಟಾಪ್‌ಗಳ ಕೊರತೆ/ಉಳಿಕೆಯ*** ಮಾಹಿತಿಗಳನ್ನು ದಿನಾಂಕ: 15.05.2018ರೊಳಗೆ ಈ ಕೆಳಕಂಡ ನಮೂನೆಯಲ್ಲಿ ಭರ್ತಿ ಮಾಡಿ ಸಲ್ಲಿಸಬೇಕೆಂದು ಸೂಚಿಸಲಾಗಿದೆ. ಸದರಿ ಮಾಹಿತಿಯನ್ನು ಇಲಾಖೆಯ ವೆಬ್‌ಸೈಟ್‌ನಲ್ಲಿ ಲಭ್ಯವಿರುವ ಗೂಗಲ್ ಫಾರ್ಮ್‌ನಲ್ಲಿಯೂ ಸಹ ಒದಗಿಸುವಂತೆ ಸೂಚಿಸಲಾಗಿದೆ.

| ಕ್ರ. ಸಂ. | ಕಾಲೇಜಿನ ಹೆಸರು | ಲ್ಯಾಪ್‌ಟಾಪ್‌ಗಳ ಕೋರಿಕೆ ಒಟ್ಟು | ಪೂರೈಸಲಾದ ಲ್ಯಾಪ್‌ಟಾಪ್-ಗಳ ಸಂಖ್ಯೆ | ವಿತರಣೆಯಾದ ಲ್ಯಾಪ್‌ಟಾಪ್‌ಗಳ ಸಂಖ್ಯೆ | ಉಳಿಕೆಯಾಗಿರುವ ಲ್ಯಾಪ್‌ಟಾಪ್‌ಗಳ ಸಂಖ್ಯೆ | ಕೊರತೆಯಿರುವ ಲ್ಯಾಪ್‌ಟಾಪ್‌ಗಳ ಸಂಖ್ಯೆ | ಉಳಿಕೆ/ಕೊರ-ತೆಗೆ ಕಾರಣ |
|---|---|---|---|---|---|---|---|
| 1 | 2 | 3 | 4 | 5 | 6 | 7 | 8 |
| | | | | | | | |

ಕಾಲೇಜು ಶಿಕ್ಷಣ ನಿರ್ದೇಶಕರು.

**ಇವರಿಗೆ,**

***ಕಾಲೇಜು ಶಿಕ್ಷಣ ಇಲಾಖೆಯ ವ್ಯಾಪ್ತಿಗೆ ಒಳಪಡುವ ಎಲ್ಲಾ ಸರ್ಕಾರಿ ಪದವಿ ಕಾಲೇಜುಗಳ ಪ್ರಾಂಶುಪಾಲರುಗಳಿಗೆ -*** ಮಾಹಿತಿ ಮತ್ತು ಸೂಕ್ತ ಕ್ರಮಕ್ಕಾಗಿ

**ಪ್ರತಿಯನ್ನು**

1. ಪ್ರಾದೇಶಿಕ ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು, ಮೈಸೂರು, ಮಂಗಳೂರು, ಧಾರವಾಡ, ಶಿವಮೊಗ್ಗ ಮತ್ತು ಗುಲ್ಬರ್ಗಾ- ಮಾಹಿತಿಗಾಗಿ